**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ,**
**ವಿರಾಜಪೇಟೆ.**
**ಸಿ.ಸಿ.658/2023**

| | | |
|---|---|---|
| ಸಾಕ್ಷಿದಾರರ ಹೆಸರು | : ಟಿ.ಹೆಚ್.ರಜಾಕ್ | ಪ್ರಾಸಾ-1 |
| ತಂದೆಯ ಹೆಸರು | : ಟಿ.ಹಸ್ಸೈನಾರ್ | ಚಾಸಾ-1 |
| ವಯಸ್ಸು | : 50 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯಾಪಾರ | ದಿನಾಂಕಃ 23.06.2026 |
| ವಾಸಸ್ಥಳ | : ವಿಜಯನಗರ, ವಿರಾಜಪೇಟೆ | |

**:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಹಾಗೂ ಚಾಸಾ 2 ರಿಂದ 4 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.15.06.2023 ರ ಹೇಳಿಕೆ, ದಿ.24.06.2023 ರ ಸ್ಥಳ ಮಹಜರ್ ನಲ್ಲಿ ತಮ್ಮ ಸಹಿಗಳನ್ನು ಗುರುತಿಸಿ, ಮೂರು ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಹೇಳಿಕೆಯನ್ನು ನಿಪಿ-1, ಮಹಜರ್ ನ್ನು ನಿಪಿ-2, ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ಮತ್ತು 2(ಎ), ಫೋಟೋಗಳನ್ನು ಪ್ರಮಾಣಪತ್ರದೊಂದಿಗೆ ನಿಪಿ-3 ರಿಂದ 6 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ದೊಣ್ಣೆಯ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಹಾಗೂ ಅದನ್ನು ಈ ಹಿಂದೆ ಎಲ್ಲೂ ನೋಡಿಲ್ಲ ಎಂದು ನುಡಿಯುತ್ತಾರೆ.

2 ವರ್ಷದ ಹಿಂದೆ ನಾನು ವಿರಾಜಪೇಟೆ ನಗರದ ಮಟನ್ ಮಾರ್ಕೆಟ್ ಬಳಿ ಬಿದ್ದು ಪೆಟ್ಟು ಮಾಡಿಕೊಂಡ ಕಾರಣ ವಿರಾಜಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಪೋಲಿಸರು ನನ್ನ ಸಹಿಗಳನ್ನು ಪಡೆದು ಅದಾದ ಸ್ವಲ್ಪ ದಿನದ ನಂತರ ನಾನು ಬಿದ್ದಿದ್ದ ಸ್ಥಳಕ್ಕೆ ಬಂದು ಫೋಟೋಗಳನ್ನು ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ನನ್ನ ಸಹಿಗಳನ್ನು ಪಡೆದು ಫೋಟೋಗಳನ್ನು ತೆಗೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಾನು ಆರೋಪಿಯ ವಿರುದ್ಧ ದೂರು ಕೊಟ್ಟಿಲ್ಲ ಹಾಗೂ ಪೋಲಿಸರಿಗೆ ಯಾವುದೇ ಸ್ಥಳ ತೋರಿಸಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ವಶಕ್ಕೆ ಪಡೆದಿಲ್ಲ. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-1 ಮತ್ತು 2 ರಲ್ಲಿರುವ ಸಂಪೂರ್ಣ ವಿವರವನ್ನು ಓದಿ ಹೇಳಿದ್ದು ಆ ವಿವರಗಳನ್ನು ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ. ನಾನು ಆರೋಪಿಯ ವಿರುದ್ಧ

ದೂರು ದಾಖಲಿಸಿ ಪೋಲಿಸರಿಗೆ ಕೃತ್ಯ ನಡೆದ ಸ್ಥಳ ತೋರಿಸಿ ನ್ಯಾಯಾಲಯದ ಮುಂದೆ ನೋಡುತ್ತಿರುವ ಕತ್ತಿಯನ್ನು ನಾನೇ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ದಿಃ24.06.2023 ರಂದು ನಾನು ವಿರಾಜಪೇಟೆ ನಗರ ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ವಿರಾಜಪೇಟೆ.